**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಸಕಲೇಶಪುರ**

**C.C.No.**1106/2023

| | | |
|---|---|---|
| ಹೆಸರುಃ | ನಂಜುಡಯ್ಯ | **CW**-7 |
| ತಂದೆ/ಗಂಡ ಹೆಸರುಃ | ಗುರು ಲಿಂಗಯ್ಯ | **PW**-9 |
| ವಯಸ್ಸುಃ | 74 ವರ್ಷ | |
| ವೃತ್ತಿಃ | ವ್ಯವಸಾಯ | |
| ವಿಳಾಸಃ | ಯಸಳೂರು | ದಿನಾಂಕಃ 16-02-2026 |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ಯವರಿಂದ.**

ಆರೋಪಿತರು ನಮ್ಮ ಊರಿನವರು ಇರುತ್ತಾರೆ. ಸಾಕ್ಷಿಯು ನಿಪಿ-7 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 7 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2 ವರ್ಷದ ಹಿಂದೆ ಠಾಣೆಯಲ್ಲಿ ಮಾಡಿರುತ್ತೇನೆ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಆ ಸಮಯದಲ್ಲಿ ನಾನು ಒಬ್ಬನೇ ಇದ್ದೆ. ಅದರಲ್ಲಿರುವ ಮಾಹಿತಿಗಳು ನನಗೆ ಗೊತ್ತಿಲ್ಲ. ನಿ ಪಿ 9 ಕಾರನ್ನು ನಾನು ನೋಡಿರುವುದಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ ಸ ಅ ಅವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)***

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ಯವರಿಂದ.**

ದಿಃ 21-07-2023 ರಂದು ಮ 12 ರಿಂದ 12.45 ರವರೆಗೆ ಪೋಲೀಸರು ನಿ ಪಿ 7 ರಂತೆ ಪಂಚನಾಮೆ ಮಾಡಿ ನನ್ನ ಸಮಕ್ಷಮ ನಿ ಪಿ 9 ಕಾರನ್ನು ವಶಪಡಿಸಿಕೊಂಡಿರುತ್ತಾರೆಂದರೆ

ಸರಿಯಲ್ಲ. ಅದರ ನಂಬರ ಕೆ ಎ 03 ಎಂ ಇ 5814 ಆಗಿರುತ್ತದೆ ಎಂದರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಪಂಚನಾಮೆ ಮಾಡಿ ಕಾರನ್ನು ವಶಪಡಿಸಿಕೊಂಡಿದ್ದರು ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ**

**ಮರು ವಿಚಾರಣೆಃ ಇಲ್ಲ**

ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೆ ಕೇ ಸ ಇ

ಸಹಿ/-

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ**

**ಸಕಲೇಶಪುರ**